-3-

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 397
ಸದಸ್ಯರ ಹೆಸರು	: ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	: 17.07.2019.
ಉತ್ತರಿಸುವ ಸಚಿವರು	: ಮಾನ್ಯ ಕಂದಾಯ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತವಾಗಿ ಯಾವುದೇ ಭೂ ಪರಿವರ್ತನೆಯಾಗದೆ ಎಷ್ಟು ಬಡಾವಣೆಗಳು/ ನಿವೇಶನಗಳನ್ನು ರಚಿಸಲಾಗಿದೆ; (ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿ ನೀಡುವುದು)	ಬೆಂಗಳೂರು ನಗರ ಜಿಲ್ಲೆಯಲ್ಲಿನ 05 ತಾಲ್ಲೂಕುಗಳ ವ್ಯಾಪ್ತಿಯಲ್ಲಿ ವ್ಯವಸಾಯದ ಜಮೀನುಗಳನ್ನು ವ್ಯವಸಾಯೇತರ ಉದ್ದೇಶಗಳಿಗೆ ಅಂದರೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರನ್ವಯ ಭೂ ಪರಿವರ್ತನೆ ಆದೇಶ ಪಡೆಯದೇ ಅನಧಿಕೃತವಾಗಿ ನಿರ್ಮಿಸಿರುವ ಬಡಾವಣೆಗಳ ವಿವರ ಈ ಕೆಳಗಿನಂತಿದೆ:- (ಕೆಳಗಿನ ಕೋಷ್ಟಕ ನೋಡಿ) ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿಯನ್ನು ಸಿಡಿ ರೂಪದಲ್ಲಿ ಸಲ್ಲಿಸಿದೆ.
ಆ)	ಅನಧಿಕೃತ ಬಡಾವಣೆ ಇದ್ದಲ್ಲಿ, ಕಂದಾಯ ಇಲಾಖೆ ಇಲ್ಲಿಯವರೆಗೂ ಅನಧಿಕೃತ ಬಡಾವಣೆಗಳ ಮೇಲೆ ಭೂ ಪರಿವರ್ತನೆ ಇಲ್ಲದೆ ಇರತಕ್ಕಂತ ಕೃಷಿ ಜಮೀನುಗಳ ಮೇಲೆ ನಿರ್ಮಾಣವಾಗಿರುವ ಹಳೆಯ ಮತ್ತು ಹೊಸ ಬಡಾವಣೆಗಳ ಮೇಲೆ ಕಾನೂನಿನಡಿಯಲ್ಲಿ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ: ನಅಇ 248 ಬೆಂಆದೇ 2016, ದಿನಾಂಕ:13/07/2016ರಲ್ಲಿ ಬೆಂಗಳೂರು ನಗರ ಮತ್ತು ಅದರ ಸುತ್ತಮುತ್ತ ನಿರ್ಮಾಣವಾಗುತ್ತಿರುವ ಅನಧಿಕೃತ ಬಡಾವಣೆಗಳನ್ನು ತಡೆಯುವ ಸಲುವಾಗಿ ಮಾರ್ಗಸೂಚಿಗಳನ್ನು ರೂಪಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿರುತ್ತದೆ. ಮುಂದುವರೆದು, ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 96(2)ರಡಿ ಕ್ರಮವಹಿಸಲಾಗುತ್ತಿದೆ.

ಕ್ರ.ಸಂ.	ತಾಲ್ಲೂಕು	ಸಂಖ್ಯೆ	ವಿಸ್ತೀರ್ಣ
1.	ಬೆಂಗಳೂರು ಉತ್ತರ	960	1760–07
2.	ಬೆಂಗಳೂರು. ದಕ್ಷಿಣ	588	1267–39
3.	ಬೆಂಗಳೂರು ಪೂರ್ವ	233	354–00
4.	ಯಲಹಂಕ	432	1004–17
5.	ಆನೇಕಲ್	302	411–18
ಒಟ್ಟು		**2515**	**4798–01**

ಸಂಖ್ಯೆ: ಆರ್‌ಡಿ 12 ಎಲ್‌ಜಿಕ್ಯೂ 2019

(ಆರ್.ವಿ.ದೇಶಪಾಂಡೆ)
ಕಂದಾಯ ಸಚಿವರು